ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ರಾಜ್ಯದಲ್ಲಿ ಅಡುಗೆ ಎಣ್ಣೆಗೆ ಕಲಬೆರಕೆ ಮಾಡಿ ಕಡಿಮೆ ಬೆಲೆಗೆ ಮಾರುತ್ತಿರುವ ಬಗ್ಗೆ

ಶ್ರೀ ಎಂ. ನಾರಾಯಣ ಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

124 (147) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅಡುಗೆ ಎಣ್ಣೆಗೆ ಕಲಬೆರಕೆ ಮಾಡಿ ಕಡಿಮೆ ಬೆಲೆಗೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರಾಜ್ಯದಲ್ಲಿ ಎಷ್ಟು ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡ್‌ಗಳಿಗೆ ಅರ್ಜಿಯನ್ನು ಸಲ್ಲಿಸಲಾಗಿದೆ; ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಸಲ್ಲಿಸುವಾಗ ಎಲ್ಲಾ ದಾಖಲೆಗಳನ್ನು ನೀಡಿದ್ದರೂ ಸಹ, ಕಾರ್ಡ್‌ಗಳು ಲಭ್ಯವಾಗದಿರುವುದಕ್ಕೆ ಕಾರಣಗಳೇನು ;

(ಇ) ಪಡಿತರ ಚೀಟಿ ನೀಡಲು ಖಾಸಗಿ ಏಜೆನ್ಸಿಗಳಿಗೆ ಪರವಾನಿಗೆ ನೀಡಲಾಗಿದೆಯೇ; ನೀಡಿದ್ದಲ್ಲಿ, ವಿವರ ನೀಡುವುದು ;

(ಈ) ಬೆಂಗಳೂರಿನ ಕೆಲವು ಪ್ರದೇಶಗಳಲ್ಲಿ ಖಾಸಗಿ ಸಂಸ್ಥೆಗಳು/ವ್ಯಕ್ತಿಗಳು ಪಡಿತರ ಚೀಟಿ ಕೊಡಿಸುವುದಾಗಿ ಸಾರ್ವಜನಿಕರಿಂದ ಹಣ ವಸೂಲು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದಲ್ಲಿ, ಅಂತಹ ಪ್ರಕರಣಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ?